ಶ್ರೀ ಬಿ. ಎಂ. ಇದಿನಬ್ಬ.—ಈಗ ತಾವು ಇಷ್ಟೆಲ್ಲಾ ಸಾಲ ಕೊಟ್ಟಿದ್ದೀರಿ ಎಂದು ಹೇಳಿದ್ದೀರಿ. ಆದರಲ್ಲಿ ಪರಿಶಿಷ್ಟ ವರ್ಗದವರಿಗೆ ಮತ್ತು ಪರಿಶಿಷ್ಟ ಜನಾಂಗದವರಿಗೆ ಎಷ್ಟು ಜನರಿಗೆ ತಾವು ಸಾಲವನ್ನು ಕೊಟ್ಟಿದ್ದೀರಿ ?

ಶ್ರೀ ಹೆಚ್. ವಿಕಾಂತಯ್ಯ.—ಅಧ್ಯಕ್ಷರೇ, ನಿಗಧಿಯಾದಂಥ ಪ್ರಶ್ನೆಯನ್ನು ಕಳುಹಿಸಿದರೆ ಉತ್ತರ ಕೊಡುತ್ತೇನೆ.

ದಿನದ ಪಟ್ಟಿಯಲ್ಲಿ ಸೇರಿಸಲಾದ ಪ್ರಶ್ನೋತ್ತರಗಳ ಪಟ್ಟಿ

ವಿಫಲವಾದ ಬಾವಿಗಳ ಮೇಲೆ ರೈತರಿಂದ ಬಡ್ಡಿ ವಸೂಲಾತಿ

೧೬೪೪. ಶ್ರೀ ಸಿ.ಪಿ. ಮೂಡಲಗಿರಿಯಪ್ಪ (ಶಿರಾ)—ಮಾನ್ಯ ಸಹಕಾರ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ವಿಫಲವಾದ ರೈತರ ಬಾವಿಗಳಿಗೆ ರಿಯಾಯಿತಿಯ ಮೊತ್ತವನ್ನು ಸರ್ಕಾರವು ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್‌ಗಳಿಗೆ ಪಾವತಿ ಮಾಡದೆ ಸದರಿ ಬ್ಯಾಂಕಿನವರು ರೈತರಿಂದ ಬಡ್ಡಿ ವಸೂಲು ಮಾಡುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಆ) ಸರ್ಕಾರವು ಬಡ್ಡಿ ಮನ್ನಾ ಮಾಡಿರುವ ಸೌಲಭ್ಯವನ್ನು ಮಧ್ಯಂತರ ಬಡ್ಡಿ ಹೊರೆ ಹೊರುತ್ತಿರುವ ರೈತರಿಗೆ ವಿಸ್ತರಿಸದಿರುವುದು ಸದರಿ ರೈತರಿಗಾಗಿರುವ ಅನ್ಯಾಯವೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಇ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರದವರು ಕೈಗೊಂಡ ಕ್ರಮವೇನು ?

ಶ್ರೀ ಹೆಚ್. ವಿಕಾಂತಯ್ಯ (ಮಾನ್ಯ ಸಹಕಾರ ಮಂತ್ರಿಗಳು). —

ಅ) ಬಂದಿದೆ.

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.

ತುಮಕೂರು ಜಿಲ್ಲೆಯಲ್ಲಿ ಭರ್ತಿ ಮಾಡದೇ ಇರುವ ಗ್ರಾಮಲೆಕ್ಕಿಗರ ಹುದ್ದೆಗಳು

೧೬೫೧. ಶ್ರೀ ಜಿ.ಎಸ್. ಶಿವಸಂಜಪ್ಪ (ಗುಬ್ಬಿ).— ಮಾನ್ಯ ಕಂದಾಯ ಮತ್ತು ಯೋಜನಾ ಹಾಗೂ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

(ಅ) ತುಮಕೂರು ಜಿಲ್ಲೆಯಲ್ಲಿ ಭರ್ತಿ ಮಾಡದೇ ಇರುವ ಗ್ರಾಮಲೆಕ್ಕಿಗರ ಹುದ್ದೆ ಎಷ್ಟು ? ಎಷ್ಟು ವರ್ಷಗಳಿಂದ ಖಾಲಿ ಇದೆ ? ಹಾಗಿದ್ದಲ್ಲಿ ಭರ್ತಿ ಮಾಡಲು ಸರ್ಕಾರವು ಕೈಗೊಂಡ ಕ್ರಮಗಳೇನು ?

(ಆ) ತುಮಕೂರು ಜಿಲ್ಲೆಯಲ್ಲಿ ಗ್ರಾಮಲೆಕ್ಕಿಗರಿಗೆ ವಸತಿ ಸೌಕರ್ಯವನ್ನು ಕಲ್ಪಿಸಲಾಗಿದೆಯೇ?

(ಇ) ಆ ಪೈಕಿ ವಸತಿ ಒದಗಿಸಿದ ಮತ್ತು ವಸತಿ ಒದಗಿಸದಿರುವ ಗ್ರಾಮಲೆಕ್ಕಿಗರ ಸಂಖ್ಯೆ ಎಷ್ಟು?

ಶ್ರೀ ಎಸ್. ಆರ್. ಬೊಮ್ಮಾಯಿ (ಮಾನ್ಯ ಕಂದಾಯ ಸಚಿವರು).—

(ಅ) ತುಮಕೂರು ಜಿಲ್ಲೆಯಲ್ಲಿ ೧೦೩ ಗ್ರಾಮಲೆಕ್ಕಿಗರ ಹುದ್ದೆಗಳು ಖಾಲಿ ಇದ್ದರೂ ಇತ್ತೀಚಿನ ಸರ್ಕಾರಿ ಆದೇಶ ಸಂ. ಆರ್‌ಡಿ ೧೯೦ ಬಿಎಸ್‌ಸಿ ೮೭ ದಿನಾಂಕ ೨೨-೪-೧೯೮೮ರಲ್ಲಿ ಮಂಜೂರು ಪಂಚಾಯತ್ ಗಳ ರಚನೆಯ ತತ್ಪರಿಣಾಮವಾಗಿ ಕಂದಾಯ ವೃತ್ತಗಳನ್ನು ವಿಸ್ತರಿಸಿ ಸುಮಾರು ೧೭೫ ಗ್ರಾಮ ಲೆಕ್ಕಿಗರ ಹುದ್ದೆಗಳನ್ನು ತುಮಕೂರು ಜಿಲ್ಲೆಗೆ ಸಂಬಂಧಿಸಿದಂತೆ ಸೃಜಿಸಿಲಾಗಿದೆ. ಆದುದರಿಂದ ಪ್ರಸ್ತುತ ಪರಿಸ್ಥಿತಿಯಲ್ಲಿ ಗ್ರಾಮಲೆಕ್ಕಿಗರ ಹುದ್ದೆಗಳು ಖಾಲಿಯಿರುವುದಿಲ್ಲ.